**ಕರ್ನಾಟಕ ಸರ್ಕಾರ**
**(ಸಿ.ಆರ್.ಪಿ.67)**

**ಹೇಳಿಕೆ ಹಾಳೆ**
**(ಆರ್.ಪಿ.ಸಂಖ್ಯೆ 57)**
**ನಮೂನೆ ಸಂಖ್ಯೆ 4**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**

**ಸೆಷನ್ಸ್‌ಕೇಸ್ ನಂಬರ್ : 167/2021**

**ಫ್ರಾಸಾ- 8 ಚಾಸಾ- 8**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಮಂಜೇಗೌಡ |
| ತಂದೆಯ ಹೆಸರುಃ | : | ತಿಮ್ಮೇಗೌಡ |
| ವಯಸ್ಸುಃ | : | 64 ವರ್ಷ |
| ಉದ್ಯೋಗಃ | : | ವ್ಯವಸಾಯ |
| ವಾಸ | : | ಮಡಬಲು ಗ್ರಾಮ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:15-07-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಈಗ ತೋರಿಸಿದ ದಾಖಲೆಯಲ್ಲಿರುವ ರುಜು ನನ್ನದೆ. ದಾಖಲೆಯನ್ನು ನಿಪಿ-7 ಎಂದು ಸಾಕ್ಷಿಯ ರುಜುವನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಈ ಸಹಿಯನ್ನು ಎಲ್ಲಿ ಮತ್ತು ಎಷ್ಟು ವರ್ಷಗಳ ಹಿಂದೆ ಹಾಕಿರುತ್ತೇನೆಂದು ಗೊತ್ತಿಲ್ಲ. ಅದರಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ಇದೆ, ಅವರು ನಮ್ಮೂರಿನವರು. ನಾನು ಸಹಿ ಹಾಕುವ ಕಾಲಕ್ಕೆ ಆರೋಪಿತರು ಇರಲಿಲ್ಲ. ನಾನು ಆಲೂರು ಪಿ ಎಸ್ ಗೆ ಹೋಗಿಲ್ಲ. ಆ ಸಮಯದಲ್ಲಿ ಆರೋಪಿ ಇರಲಿಲ್ಲ. ಅಲ್ಲಿ ನನ್ನ ಸಮಕ್ಷಮ ಯಾವುದೇ ವಸ್ತುವನ್ನು ವಶಪಡಿಸಿಕೊಂಡಿಲ್ಲ. ನ್ಯಾಯಾಲಯದ ಮುಂದಿರುವ ಎಂ.ಒ.1ರ ಮಚ್ಚನ್ನು ನಾನು ಈ ಹಿಂದೆ ನೋಡಿಲ್ಲ ಮತ್ತು ಅದನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿಲ್ಲ. ಆರೋಪಿತರ ದನದ ಕೊಟ್ಟಿಗೆಗೆ ನನ್ನನ್ನು ಪೊಲೀಸರು ಕರೆದುಕೊಂಡು ಹೋಗಿಲ್ಲ ಮತ್ತು ಅಲ್ಲಿ ಎಂ.ಒ.1ನ್ನು ಪೊಲೀಸರು ನನ್ನ ಸಮಕ್ಷಮ ವಶಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ದಿನಾಂಕ 2-9-2020ರಂದು ಆಲೂರು ಪೊಲೀಸ್ ಠಾಣೆಗೆ ನಾನು ಹೋಗಿದ್ದೆನು, ಅಲ್ಲಿ ಆರೋಪಿತರು ಕೂಡ ಇದ್ದರು ಎಂದರೆ ಸರಿಯಲ್ಲ. ಸದರಿ ಆರೋಪಿತರು ಈ ಪ್ರಕರಣದ ಕೃತ್ಯಕ್ಕೆ ಸಂಬಂಧಪಟ್ಟಂತೆ ತಾನು ಬಳಸಿದ್ದ ಮಚ್ಚನ್ನು ಹಾಜರುಪಡಿಸುವುದಾಗಿ ಪೊಲೀಸರ ಮುಂದೆ ಹೇಳಿದ ಮೇರೆಗೆ ಪೊಲೀಸರು ಆರೋಪಿತರನ್ನು ಮತ್ತು ನನ್ನನ್ನು ಕರೆದುಕೊಂಡು ಆರೋಪಿತರು ತೋರಿಸಿದ ಸದರಿಯವರ ದನದ ಕೊಟ್ಟಿಗೆಗೆ ಬಂದಿದ್ದರು ಎಂದರೆ ಸರಿಯಲ್ಲ. ಅಲ್ಲಿ ಆರೋಪಿತರು ಮಚ್ಚನ್ನು ಹಾಜರುಪಡಿಸಿದ ಮೇರೆಗೆ ಪೊಲೀಸರು ಅದನ್ನು ವಶಪಡಿಸಿಕೊಂಡು ನಿಪಿ-7ರಂತೆ ಮಹಜರು ಮಾಡಿ ನನ್ನ ಸಹಿ ಪಡೆದುಕೊಂಡದ್ದು ಎಂದರೆ ಸರಿಯಲ್ಲ. ಆರೋಪಿತರು ನಮ್ಮೂರಿನವರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ **ವಕೀಲರಿಂದಃ**

ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**